ಆ) ನೀಡಲಾಗಿದ್ದಲ್ಲಿ, ಅನುದಾನ ಮತ್ತು ಸಾಲ ಮಂಜೂರಾತಿ ಮಾಡಲಾಗಿದೆಯೇ;

ಇ) ಇದ್ದಲ್ಲಿ, ಫಲಾನುಭವಿಗಳು ಯಾರು ಯಾರು; ವಿವರ ನೀಡುವುದು?

ಶ್ರೀ ಪ್ರೊ.ಡಾ ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಯಾವುದೇ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ಭಾಗ್ಯಲಕ್ಷ್ಮಿ ಯೋಜನೆಯ ಫಲಾನುಭವಿಗಳು

861 (1142) ಶ್ರೀ ಜಾರ್ಜ್ ಕೆ.ಜೆ. (ಸರ್ವಜ್ಞ ನಗರ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ವಜ್ಞ ನಗರ ವಿಧಾನ ಸಭಾ ಕ್ಷೇತ್ರಕ್ಕೆ ಭಾಗ್ಯಲಕ್ಷ್ಮಿ ಯೋಜನೆಯಡಿಯಲ್ಲಿ ಸರ್ಕಾರದ ವತಿಯಿಂದ ಎಷ್ಟು ಫಲಾನುಭವಿಗಳಿಗೆ ಬಾಂಡ್ ವಿತರಿಸಲಾಗಿದೆ;

ಆ) ಇದ್ದಲ್ಲಿ, ಹೆಸರು ಮತ್ತು ವಿವರ ನೀಡುವುದು;

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ಸರ್ವಜ್ಞ ನಗರ ವಿಧಾನ ಸಭಾ ಕ್ಷೇತ್ರಕ್ಕೆ ಭಾಗ್ಯಲಕ್ಷ್ಮಿ ಯೋಜನೆಯಡಿಯಲ್ಲಿ ಸರ್ಕಾರದ ವತಿಯಿಂದ 587 ಫಲಾನುಭವಿಗಳಿಗೆ ಬಾಂಡ್ ವಿತರಿಸಲಾಗಿದೆ.

ಆ) ವಿವರಗಳನ್ನು ಮಾನ್ಯ ಸದಸ್ಯರಿಗೆ ಪ್ರತ್ಯೇಕವಾಗಿ ಒದಗಿಸ ಲಾಗುವುದು.